ಕರ್ನಾಟಕ ಸರ್ಕಾರ

ಉದ್ಯೋಗ ಮತ್ತು ತರಬೇತಿ ಇಲಾಖೆ

ವಿಶ್ವವಿದ್ಯಾನಿಲಯ ಉದ್ಯೋಗ ಮಾಹಿತಿ ಮತ್ತು ಮಾರ್ಗದರ್ಶನ ಕೇಂದ್ರ, ಮಂಗಳಗಂಗೋತ್ರಿ

'ಕರ್ನಾಟಕ ಲೋಕ ಸೇವಾ ಆಯೋಗದ ನೇಮಕಾತಿಗಳ ಪ್ರಕಟಣೆ'

ಆಯೋಗವು ಕರ್ನಾಟಕ ನಾಗರೀಕ ಸೇವೆಗಳು(ನೇರ ನೇಮಕಾತಿ)(ಸಾಮಾನ್ಯ) ನಿಯಮಗಳು 2021ರ ನಿಯಮಗಳು ಮತ್ತು ತಿದ್ದುಪಡಿ ನಿಯಮ 2022ರನ್ವಯ ಈ ಕೆಳಕಂಡ ಉಳಿಕೆ ಮೂಲ ವೃಂದ ಗ್ರೂಪ್ ಸಿ' ಹುದ್ದೆಗಳನ್ನು ಭರ್ತಿ ಮಾಡಲು ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಆಸಕ್ತ ಅರ್ಹ ಅಭ್ಯರ್ಥಿಗಳು ವೆಬ್‌ಸೈಟ್ ವಿಳಾಸಗಳಾದ https://kpsc.kar.nic.in/ ಗಳಲ್ಲಿ ಅಧಿಸೂಚನೆ ಮತ್ತು ಅರ್ಜಿ ನಮೂನೆಗಳನ್ನು ಡೌನ್ಲೋಡ್ ಮಾಡಿಕೊಂಡು ಸಲ್ಲಿಸಬಹುದಾಗಿದೆ. ಅರ್ಜಿಗಳನ್ನು ಆನ್ಲೈನ್‌ನಲ್ಲಿ ಸಲ್ಲಿಸಲು **ದಿ: 23.03.2023 ರಿಂದ ದಿ: 23.04.2023** ಕೊನೆಯ ದಿನಾಂಕಗಳಾಗಿರುತ್ತವೆ.

ಇಲಾಖೆಯ ಹೆಸರು/ ಹುದ್ದೆಯ ಪದನಾಮ: ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕ ಪತ್ರ ಇಲಾಖೆಯಲ್ಲಿನ ಲೆಕ್ಕ ಸಹಾಯಕರು

ಹುದ್ದೆಗಳ ಸಂಖ್ಯೆ: 242

ವಿದ್ಯಾರ್ಹತೆ: Must passes B.Com or B.B.M or B.B.A Degree, or Passes any other equivalent qualification Notified as such by U.G.C

ಇಲಾಖೆಯ ಸೃಷ್ಟೀಕರಣದಂತೆ ಈ ಕೆಳಕಂಡ ವಿದ್ಯಾರ್ಹತೆಗಳು ತತ್ಸಮಾನ (Equivalent) ವಿದ್ಯಾರ್ಹತೆಗಳಾಗಿರುತ್ತದೆ.

1. BBS/BBM/BBE Restructured as BBA or B.Com or B.Com (Hons) 2. BIBF be Restructured as BBA or B.Com (International Business & Finance)

ವಯೋಮಿತಿ. ಕನಿಷ್ಠ- 18 ವರ್ಷಗಳು

ಗರಿಷ್ಠ- 35 ವರ್ಷಗಳು ಪ್ರ.ವ.-2ಎ, ಪ್ರ.ವ.2ಬಿ ಪ್ರ.ವ 3ಎ, ಪ್ರ.ವ.3ಬಿ – 38 ವರ್ಷಗಳು ಪ.ಜಾ., ಪ.ಪಂ., ಪ್ರ.ವ -1 - 40 ವರ್ಷಗಳು

ವೇತನ ಶ್ರೇಣಿ: ರೂ. 27,650-52,650/-

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: **080-30574957/ 30574901** ಅಥವಾ ಉಪಮುಖ್ಯಸ್ಥರು, ವಿಶ್ವವಿದ್ಯಾನಿಲಯ ಉದ್ಯೋಗ ಮಾಹಿತಿ ಮತ್ತು ಮಾರ್ಗದರ್ಶನ ಕೇಂದ್ರ, ಮಂಗಳಗಂಗೋತ್ರಿ ಕಛೇರಿಯನ್ನು ಸಂಪರ್ಕಿಸಬಹುದಾಗಿದೆ.

(ಎಸ್.ಜೆ.ಹೇಮಚಂದ್ರ) 16/3/23

ಉಪಮುಖ್ಯಸ್ಥರು
ವಿಶ್ವವಿದ್ಯಾನಿಲಯ ಉದ್ಯೋಗ ಮಾಹಿತಿ ಮತ್ತು
ಮಾರ್ಗದರ್ಶನ ಕೇಂದ್ರ
ಮಂಗಳೂರು ವಿಶ್ವವಿದ್ಯಾನಿಲಯ

ಕರ್ನಾಟಕ ಲೋಕಸೇವಾ ಆಯೋಗ, " ಉದ್ಯೋಗ ಸೌಧ ",ಬೆಂಗಳೂರು -560001

ಸಂಖ್ಯೆ: ಪಿಎಸ್ ಸಿ 455 ಆರ್ ಟಿಬಿ(4) /2022-23/2331 ದಿನಾಂಕ:14-03-2023

ಅಧಿಸೂಚನೆ

1. ಆಯೋಗವು ಕರ್ನಾಟಕ ನಾಗರೀಕ ಸೇವೆಗಳು (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021ರ ನಿಯಮಗಳು ಹಾಗೂ ತಿದ್ದುಪಡಿ ನಿಯಮ 2022ರನ್ವಯ ಈ ಕೆಳಕಂಡ ಉಳಿಕೆ ಮೂಲ ವೃಂದದ ಗ್ರೂಪ್ 'ಸಿ' ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ On-line ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

ಕ್ರಮ ಸಂಖ್ಯೆ	ಇಲಾಖೆಯ ಹೆಸರು /ಹುದ್ದೆಯ ಪದನಾಮ	ಉಳಿಕೆ ಮೂಲ ವೃಂದ
1	ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಲ್ಲಿನ ಲೆಕ್ಕ ಸಹಾಯಕರು	242

2. ಅರ್ಜಿ ಶುಲ್ಕ / ಸ್ವೀಕೃತಿ ಕಾಲಮಿತಿ :

ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ	**23-03-2023**
ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ	**23-04-2023**
ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ	**24-04-2023**

ವಿಶೇಷ ಸೂಚನೆ:-

- ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಸಮಯದಲ್ಲಿ ಎಲ್ಲಾ ವಿವರಗಳನ್ನು ಸರಿಯಾಗಿ ಅಭ್ಯರ್ಥಿಸಿಕೊಂಡು ಖಚಿತಪಡಿಸಿಕೊಂಡು ತಮಗೆ ಅನ್ವಯವಾಗುವ ವಿವರಗಳನ್ನು ಭರ್ತಿ ಮಾಡತಕ್ಕದ್ದು.
- ಒಮ್ಮೆ ಅರ್ಜಿ ಸಲ್ಲಿಸಿದ ನಂತರ ಅರ್ಜಿಯಲ್ಲಿ ವಿವರಗಳನ್ನು ತಿದ್ದುಪಡಿ / ಸೇರ್ಪಡೆ ಮಾಡುವಂತೆ ನೀಡುವ ಯಾವುದೇ ಮನವಿಗಳನ್ನು ತಿರಸ್ಕರಿಸಲಾಗುವುದು.
- ನಿಯಮಾನುಸಾರ ಆನ್ ಲೈನ್ ಅರ್ಜಿಯೊಂದಿಗೆ ಸಲ್ಲಿಸುವ ಲಗತ್ತುಗಳ ಆಧಾರದ ಮೇಲೆ ಮಾತ್ರವೇ ದಾಖಲೆಗಳ ಪರಿಶೀಲನೆ ಮಾಡಲಾಗುವುದರಿಂದ ವಯೋಮಿತಿ, ವಿದ್ಯಾರ್ಹತೆಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಹಾಗೂ ಅರ್ಜಿಯಲ್ಲಿ ಕೋರಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರ/ಇತರೆ ಪ್ರಮಾಣ ಪತ್ರಗಳನ್ನು ತಮ್ಮ ಹೆಸರಿನಲ್ಲಿಯೇ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಅಧಿಸೂಚನೆಯ ಅನುಬಂಧದಲ್ಲಿ ಸೂಚಿಸಿರುವ ನಮೂನೆಗಳಲ್ಲಿಯೇ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಸದರಿ ದಾಖಲೆಗಳನ್ನು ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು. (ದಾಖಲೆಗಳು ಸುಸ್ಪಷ್ಟವಾಗಿರುಬೇಕು) ತಪ್ಪಿದ್ದಲ್ಲಿ, ಅವರ ಮೀಸಲಾತಿ/ಅಭ್ಯರ್ಥಿತ್ವವನ್ನು ತಿರಸ್ಕರಿಸಲಾಗುವುದು.
- ಅರ್ಜಿಯಲ್ಲಿ ಕೋರದೇ ತದನಂತರದಲ್ಲಿ ಮನವಿ ಮುಖಾಂತರ ಯಾವುದೇ ಮೀಸಲಾತಿಯನ್ನು ಕೋರಿದ್ದಲ್ಲಿ/ದಾಖಲೆಗಳನ್ನು ಸಲ್ಲಿಸಿದಲ್ಲಿ ಪರಿಗಣಿಸಲಾಗುವುದಿಲ್ಲ.

2.1 ಅರ್ಜಿಗಳನ್ನು Online ಮೂಲಕವೇ ಭರ್ತಿ ಮಾಡಿ , ಭಾವಚಿತ್ರ/ಸಹಿ /ವಯೋಮಿತಿ/ ವಿದ್ಯಾರ್ಹತೆ ಹಾಗೂ ಕೋರಿದ ಮೀಸಲಾತಿಗೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಅಪ್ಲೋಡ್ ಮಾಡಿದ ನಂತರ ಶುಲ್ಕವನ್ನು ಯಾವುದೇ ಕಾಮನ್ ಸರ್ವೀಸ್ ಸೆಂಟರ್‌ಗಳಲ್ಲಿ (CSC) ಅಥವಾ ನೆಟ್ ಬ್ಯಾಂಕಿಂಗ್ / ಡೆಬಿಟ್ ಕಾರ್ಡ್/ ಕ್ರೆಡಿಟ್ ಕಾರ್ಡ್ ಮೂಲಕ ಸಂದಾಯ ಮಾಡಬಹುದಾಗಿರುತ್ತದೆ. ಶುಲ್ಕವನ್ನು